ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ವೈದ್ಯಕೀಯ ಶಿಕ್ಷಣದ ಫೀಸ್ ಕಡಿತಗೊಳಿಸುವ ಕುರಿತು

ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

641(638) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2020-2021 ರ ಶೈಕ್ಷಣಿಕ ವರ್ಷದಲ್ಲಿ ವೈದ್ಯಕೀಯ ಶಿಕ್ಷಣ ಕಾಲೇಜುಗಳ ಫೀಸ್ ಕಡಿತಗೊಳಿಸುವ ಬಗ್ಗೆ ಸರ್ಕಾರದ ನಿಲುವೇನು;

(ಆ) ಕೊರೋನ ಅವಧಿಯಲ್ಲಿ ಪೋಷಕರು ಆರ್ಥಿಕ ಸಂಕಷ್ಟದಲ್ಲಿರುವ ಸಮಯದಲ್ಲಿ ವೈದ್ಯಕೀಯ ಶಿಕ್ಷಣ ನೀಡುವ ಕಾಲೇಜುಗಳು ಎಷ್ಟು ಪ್ರಮಾಣದಲ್ಲಿ ಫೀಸನ್ನು ಕಡಿತಗೊಳಿಸಲು ಒಪ್ಪಿಕೊಂಡಿವೆ; ಈ ಕುರಿತು ಖಾಸಗಿ ಶಿಕ್ಷಣ ಸಂಸ್ಥೆಗಳೊಂದಿಗೆ ಚರ್ಚಿಸಲಾಗಿದೆಯೇ; ಇಲ್ಲವಾದಲ್ಲಿ, ಯಾವಾಗ ಚರ್ಚಿಸಲಾಗುವುದು;

(ಇ) ಬಡ ಮಕ್ಕಳ ಶೈಕ್ಷಣಿಕ ಶುಲ್ಕವನ್ನು ಸರ್ಕಾರದ ವತಿಯಿಂದ ಪಾವತಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ; ಈ ಕುರಿತು ಸರ್ಕಾರದ ನಿಲುವೇನು?